SC: 111/2021
PW:38 CW:55

ಕರ್ನಾಟಕ ಸರ್ಕಾರ (ಸಿ.ಆರ್.ಪಿ67)

| |
|---|
| ಹೇಳಿಕೆ ಹಾಳೆ<br>ಆರ್.ಪಿ. ಸಂಖ್ಯೆ57<br>ನಮೂನೆ ಸಂಖ್ಯೆ4<br>(ಸಿವಿಲ್) |

## 3 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿಕ್ಕಬಳ್ಳಾಪುರ

## ಸತ್ರ ಪ್ರಕರಣ ಸಂಖ್ಯೆಃ 111/2021

| | |
|---|---|
| PW | 38 |
| CW | 55 |

**ಸಾಕ್ಷಿಯನ್ನು ಕರೆಯಿಸಿ ಸತ್ಯ ಬೋಧನೆ ಮಾಡಿ ಪ್ರಮಾಣೀಕರಿಸಿದ ದಿನಾಂಕ** 25.04.2025

| | | |
|---|---|---|
| ಸಾಕ್ಷಿಯ ಹೆಸರು | : | ಮನ್ಸೂರ್ |
| ತಂದೆಯ ಹೆಸರು | : | ಸಾದಿಕ್ |
| ವಯಸ್ಸು | : | 27 ವರ್ಷ |
| ಉದ್ಯೋಗ | : | ಡ್ರೈವರ್ ಕೆಲಸ |
| ವಾಸಸ್ಥಳ | : | ಗೌರಿಬಿದನೂರು |

**ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ**

1. ನನಗೆ ಮೃತ ವಿಶ್ವನಾಥ ಇವರ ಪರಿಚಯ ಇಲ್ಲ. ನನಗೆ ಈ ಕೇಸಿನ ಯಾವುದೇ ಸಾಕ್ಷಿದಾರರ ಪರಿಚಯ ಇರುವುದಿಲ್ಲ. ಈ ದಿನ ನ್ಯಾಯಾಲಯದ ಮುಂದೆ ಹಾಜರಿರುವ 2 ಮತ್ತು 4 ನೇ ಆರೋಪಿತರ ಪರಿಚಯ ಇಲ್ಲ. ಅದೇ ರೀತಿ ಈ ದಿನ ನ್ಯಾಯಾಲಯದ ಮುಂದೆ ವಿ ಸಿ ಮುಖಾಂತರ ಹಾಜರುಪಡಿಸಿದ 1 ಮತ್ತು 3 ನೇ ಆರೋಪಿತರ ಪರಿಚಯ ಇಲ್ಲ.

2. ಸಾಕ್ಷಿದಾರರು ನಿಪಿ-5 ರಲ್ಲಿರುವ ಸಹಿಯನ್ನು ನೋಡಿ ಅದು ನನ್ನ ಸಹಿ ಅಲ್ಲ ಎಂದು ನುಡಿದಿರುತ್ತಾರೆ. ಪೊಲೀಸರು ನನ್ನನ್ನು ಗೌರಿಬಿದನೂರು ಸರ್ಕಾರಿ ಆಸ್ಪತ್ರೆ ಬಳಿ ಕರೆಸಿ ನನ್ನ ಸಹಿ

ಪಡೆದಿರುತ್ತಾರೆ. ಪೊಲೀಸರು ನನ್ನ ಸಮಕ್ಷಮ ಮಹಜರ್ ಕ್ರಮ ಜರುಗಿಸಿ ಯಾವುದೇ ದ್ವಿಚಕ್ರ ವಾಹನವನ್ನು ಜಪ್ತಿಪಡಿಸಿರುತ್ತಾರೋ ಇಲ್ಲವೋ ಎಂದು ನನಗೆ ತಿಳಿದಿಲ್ಲ. ನನ್ನ ಜೊತೆ ಬೇರೆ ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ತಿಳಿದಿಲ್ಲ. ನಿಪಿ–5 ರಲ್ಲಿ ಬರೆದ ವಿಚಾರಗಳು ನನಗೆ ತಿಳಿದಿಲ್ಲ.

**(ಈ ಹಂತದಲ್ಲಿ ಸರ್ಕಾರಿ ಅಭಿಯೋಜಕರ ವಿನಂತಿಯ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ</u>**

3. ದಿನಾಂಕ 05.08.2021 ರಂದು ಬೆಳಗ್ಗೆ 10.00 ಗಂಟೆಯಿಂದ 11.00 ಗಂಟೆ ಸಮಯದಲ್ಲಿ ಪೊಲೀಸರು ನನ್ನನ್ನು, ಚಾಸಾ–10 ಹಾಗೂ ಚಾಸಾ–56 ರವರನ್ನು ಪೊಲೀಸ್ ಠಾಣೆಗೆ ಕರೆಸಿದ್ದು, ನಮ್ಮ ಸಮಕ್ಷಮ 2 ನೇ ಆರೋಪಿ ಕೃತ್ಯಕ್ಕೆ ಬಳಸಿದ ಒಂದು ದ್ವಿಚಕ್ರ ವಾಹನವನ್ನು ಹಾಜರುಪಡಿಸಿದ್ದು, ಅದನ್ನು ಪೊಲೀಸರು ನಿಪಿ–5 ಮಹಜರ್ ಮೂಲಕ ಜಪ್ತಿಪಡಿಸಿ ಚಾಸಾ–10, ಚಾಸಾ–56 ಹಾಗೂ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನಿಪಿ–5 ರಲ್ಲಿ ಕ್ರಮ ಸಂಖ್ಯೆ 2 ರ ಸಹಿ ನನ್ನದೇ ಆಗಿರುತ್ತದೆ ಎಂದರೆ ಸರಿಯಲ್ಲ.

4. ನನಗೆ ನಿಪಿ–5 ಮಹಜರ್ ವಿಚಾರ ತಿಳಿದಿದ್ದು, ನಮ್ಮ ಸಮಕ್ಷಮ 2 ನೇ ಆರೋಪಿ ಹಾಜರುಪಡಿಸಿದ್ದ ದ್ವಿಚಕ್ರ ವಾಹನವನ್ನು ಜಪ್ತಿಪಡಿಸಿದ್ದರೂ ಸಹ ಈಗ ಆರೋಪಿತರೊಂದಿಗೆ ಶಾಮೀಲಾಗಿ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎ.ಸಿ.ಡಿ ಹಾಗೂ ಶ್ರೀ ಕೆ.ಎಸ್.ಎನ್. ವಕೀಲರ ಪರವಾಗಿ ಶ್ರೀ ಎನ್.ಕೆ. ವಕೀಲರಿಂದಃ**

ಪಾಟೀಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

**ಪಾಟೀ ಸವಾಲುಃ**

3 ನೇ ಆರೋಪಿಪರ ಶ್ರೀ ಜಿ.ಹೆಚ್.ಎನ್. ವಕೀಲರನ್ನು ಕೂಗಿಸಿದ್ದು, ಗೈರುಹಾಜರಿದ್ದು, ಯಾರೂ ಪ್ರತಿನಿಧಿಸದೇ ಇರುವ ಕಾರಣ ಪಾಟೀಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆಃ ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ದಿನಾಂಕ** 25.04.2025 **ರಂದು ಬೆರಳಚ್ಚುಗಾರರಿಂದ ಬೆರಳಚ್ಚು ಮಾಡಿಸಲಾಯಿತು** )

ಓದಿ ಹೇಳಿ ಕೇಳಿ ಸರಿ ಇದೆ

ಸಹಿ/-

**(ಎಸ್. ಶ್ರೀಧರ)**

ಮೂರನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಬಳ್ಳಾಪುರ.